ಅಪೂರ್ಣವಾಗಿರುವ ನೀರಾವರಿ ಯೋಜನೆಗಳು

393(662); ಶ್ರೀ ಮಲ್ಲಿಕಾರ್ಜುನ ಸಿದ್ಧರಾಮಪ್ಪ ಖೂಬಾ

1) ರಾಜ್ಯದಲ್ಲಿ ಅಪೂರ್ಣವಾಗಿರುವ ನೀರಾವರಿ ಯೋಜನೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಅಂಕಿ ಅಂಶಗಳನ್ನು ಒದಗಿಸುವುದು)

2) ಪ್ರತಿ ಯೋಜನೆಗಳನ್ನು ಯಾವಾಗ ಪ್ರಾರಂಭಿಸಲಾಯಿತು; ಈ ಯೋಜನೆಗಳಿಗೆ ಇಲ್ಲಿಯವರೆಗೆ ಮಾಡಿರುವ ವೆಚ್ಚವೆಷ್ಟು? ಬಹುತೇಕ ನೀರಾವರಿ ಯೋಜನೆಗಳು ಹಲವಾರು ವರ್ಷಗಳಿಂದ ನಿಧಾನಗತಿಯಲ್ಲಿ ಸಾಗುತ್ತಿರುವುದಕ್ಕೆ ಕಾರಣಗಳೇನು;

3) ಪ್ರಸಕ್ತ ಸಾಲಿನಲ್ಲಿ ಈ ಯೋಜನೆಗಳನ್ನು ಪೂರ್ಣಗೊಳಿಸಲು ಸರ್ಕಾರದ ಮುಂದಿರುವ ಕ್ರಮಗಳೇನು; ಈ ವಿಳಂಬಕ್ಕೆ ಕಾರಣಕರ್ತರಾದ ಮೇಲೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ?

ಶ್ರೀ ಎಂ.ಬಿ. ಪಾಟೀಲ (ಜಲ ಸಂಪನ್ಮೂಲ ಸಚಿವರು ಭಾರಿ ಮತ್ತು ಮಧ್ಯಮ ನೀರಾವರಿ)

1) **ಮತ್ತು 2)** ರಾಜ್ಯದಲ್ಲಿ ಅಪೂರ್ಣವಾಗಿರುವ ನೀರಾವರಿ ಯೋಜನೆಗಳ ಸಂಖ್ಯೆ 32 (ಜಿಲ್ಲಾವಾರು ಅಂಕಿ ಅಂಶಗಳನ್ನು ಅನುಬಂಧ–1 ರಲ್ಲಿ ನೀಡಲಾಗಿದೆ)

3) ಪ್ರಗತಿಯಲ್ಲಿರುವ ನೀರಾವರಿ ಯೋಜನೆಗಳನ್ನು ಪೂರ್ಣಗೊಳಿಸಲು ಕ್ರಿಯಾ ಯೋಜನೆ ರೂಪಿಸಲಾಗಿದೆ. ಸದರಿ ಕಾಮಗಾರಿಗಳನ್ನು ಪೂರ್ಣಗೊಳಿಸಲು ಬೇಕಾದ ಅನುದಾನವನ್ನು ಒದಗಿಸಿ, ಕೆಲವೊಂದು ನೀರಾವರಿ ಯೋಜನೆಯನ್ನು ತ್ವರಿತವಾಗಿ ಪೂರ್ಣಗೊಳಿಸಲು ಕೇಂದ್ರ ಸರ್ಕಾರದ ಎ.ಐ.ಬಿ.ಪಿ ಧನ ಸಹಾಯದ ಅಡಿಯಲ್ಲಿ ಹಾಗೂ ನಂಜುಂಡಪ್ಪಾ ವಿಶೇಷ ಪ್ಯಾಕೇಜ್ ಅಡಿಯಲ್ಲಿ ಕಾಮಗಾರಿಗಳನ್ನು ನಿರ್ವಹಿಸಲಾಗುತ್ತಿದೆ. ಅರಣ್ಯ ಇಲಾಖೆ, ವಿದ್ಯುತ್ ಹಾಗೂ ರೈಲ್ವೆ ಮಂಡಳಿಗಳಿಂದ ಬೇಕಾಗುವ ಅನುಮೋದನೆಗಳನ್ನು ಶೀಘ್ರವಾಗಿ ಪಡೆದು ಕೆಲಸಗಳನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಯೋಜಿಸಲಾಗಿದೆ.